# ಮಾಡು ದಾನ ಧರ್ಮಪರ

1. **Ref.:** Samagra Dasa Sahitya, Samputa 3.2 published by Kannada & Culture Dept, Govt of Karnataka, Bengaluru, page No. 199.
2. **Note:** This song is not available in the books of Shri Betageri Krishna Sharma and Shri Bengeri Huchha Rayaru and also in the books of Prof. S.K. Ramachandra Rao and also in the books of Sri. Pavanje Guru Rao and also in the books of Gorebala Hanumantha Rayaru.
3. **Note:** Singer has followed these lyrics.
4. **Note:** This song has Purandara Vittala Ankita in the above given reference. But few say that the lyricist is Sri. Belur Vaikuntadaasaru. In above Ref book, page No. 70, the song: "nechhadiree bhAgya ArigU sthiravalla - ನೆಚ್ಚದಿರೀ ಭಾಗ್ಯ ಆರಿಗೂ ಸ್ಥಿರವಲ್ಲ" – is similar to this song.

ಮಾಡು ದಾನ ಧರ್ಮಪರ ಉಪಕಾರವ ಮರೆಯದಿರೆಚ್ಚರಿಕೆ ॥ ಪ ॥
ಕೇಡ ನೆನೆಯಬೇಡ ನಂಬಿದವರ ಮೇಲೆ ಕೆಡುವೆ ನೀನೆಚ್ಚರಿಕೆ ॥ ಅಪ ॥

ಬಾಳು ಬದುಕು ಸಿರಿ ಇರುವಾಗ ಬಂಧು ಬಳಗಗಳೆಚ್ಚರಿಕೆ
ಹಾಳು ಸಂಸಾರಕ್ಕೆ ಹಲವರ ಬಾಯ್ಗಳ ಬಡಿಯದಿರೆಚ್ಚರಿಕೆ ॥ 1 ॥

ಮೂಢರ ಒಡನಾಡಿ ಮುಂದೆ ಕೆಡಲು ಬೇಡ ಮೋಸ ನೋಡೆಚ್ಚರಿಕೆ
ನಾಡೊಳು ಸುಜನರ ನೋಡಿ ನಡೆ ಕಂಡ್ಯ ನಟನೆ ಬೇಡೆಚ್ಚರಿಕೆ ॥ 2 ॥

ಚೆನ್ನಾಗಿ ಬದುಕಿದೆ ಗಳಿಸಿದೆ ನಾನೆಂಬ ಹೆಮ್ಮೆ ಬೇಡೆಚ್ಚರಿಕೆ
ನಿನ್ನಾಯು ಮುಗಿದಿರಲು ಯಮದೂತರು ಬಂದು ಎಳೆಯುವರೆಚ್ಚರಿಕೆ ॥ 3 ॥

ಒಬ್ಬರಂತೆಲ್ಲರ ನೋಡಿ ಸತ್ಕರ್ಮದಿ ಉಬ್ಬಬೇಡೆಚ್ಚರಿಕೆ
ಕಬ್ಬು-ಬಿಲ್ಲನ ಪಿತನ ಏಕಾಂತ ಭಾವದಿಂ ನೆರೆನಂಬು ಎಚ್ಚರಿಕೆ ॥ 4 ॥

ಹೆಣ್ಣು ಹೊನ್ನು ಮಣ್ಣು ನಿನ್ನನಗಲಿಸಿ ಹೋಗುವರೆಚ್ಚರಿಕೆ

ಮುನ್ನ ಮಾಡಿದ ಪುಣ್ಯ ಬೆನ್ನಟ್ಟಿ ಬರುವುದು ಮುಂದೆ ನೋಡೆಚ್ಚರಿಕೆ ॥ 5 ॥

ತಿಂದೋಡಿ ಬಂಧು-ಬಳಗ ತಪ್ಪಿಸಿ ಕೊಂಬರೆಂದು ನೋಡೆಚ್ಚರಿಕೆ
ಎಂದೆಂದು ಅಗಲದ ಬಂಧು ಶ್ರೀಹರಿ ನಮಗೆಂದು ನೋಡೆಚ್ಚರಿಕೆ ॥ 6 ॥

ಕಾಲನ ದೂತರು ಯಾವಾಗ ಎಳೆವರೋ ಕಾಣದು ಎಚ್ಚರಿಕೆ
ಬೇಲೂರು ಪುರವಾಸ ಪುರಂದರವಿಠಲನ ಆಳಾಗು ಎಚ್ಚರಿಕೆ ॥ 7 ॥

**Classification:** Keerthane
**Ankita:** purandara vittala
**Location:** Belur (most likely - this place as this is mentioned in the kruti)
**Category:** Loka Neeti,
**Sub-Category:** dharma, baduku, Lakshmi, bandhu, samsara, bayi, mosa, jana, garva, yama, hennu, bangara, punya, beluru,
**Pravachana:** NA
**Explanation:** NA